## ಪ್ರಥಮ ದರ್ಜೇ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಶಹಾಬಾದ

**CC No.942/2024**
**CW: 03 P W: 01**

### ಸಾಕ್ಷಿಯನ್ನು ಪ್ರಮಾಣೀಕರಿಸಿದ ದಿನಾಂಕ : 22.12.2025

| | |
|---|---|
| ಹೆಸರು | : ಜಗನ್ನಾಥ ಬಿರಾದಾರ |
| ತಂದೆಯ ಹೆಸರು | : ಚಂದ್ರಶೇಖರ |
| ವಯಸ್ಸು | : 52 |
| ಉದ್ಯೋಗ | : ಕೂಲಿ |
| ವಾಸಸ್ಥಳ | : ಕಲಬುರಗಿ |

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ಚಾಸಾ 1 ಹಾಗೂ ಚಾಸಾ-2 ಇವರ ಪರಿಚಯ ನನಗೆ ಇರುವುದಿಲ್ಲ. ಈ ಹಂತದಲ್ಲಿ ಕಡತದಲ್ಲಿರುವ ಒಂದು ದಾಖಲೆಯನ್ನು ತೋರಿಸಿದ್ದು, ಅದು ಸ್ಥಳ ಪಂಚನಾಮೆಯಾಗಿದ್ದು, ಸದರಿ ದಾಖಲೆಯನ್ನು ನಿಪಿ-1 ಎಂದು, ಸಾಕ್ಷಿದಾರರ ಸಹಿಯನ್ನು ನಿ.ಪಿ.1 (ಎ) ಎಂದು ಗುರುತಿಸಲಾಯಿತು. ಯಾವ ಕಾರಣಕ್ಕೆ ದಾಖಲೆಯ ಮೇಲೆ ನನ್ನ ಸಹಿಯನ್ನು ಹಾಕಿರುತ್ತೇನೆ ಎಂದು ಹೇಳಲು ಬರುವುದಿಲ್ಲ.

ಯಾವ ದಿನಾಂಕ ಮತ್ತು ಸಮಯದಲ್ಲಿ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದು ನನಗೆ ಹೇಳಲು ಬರುವುದಿಲ್ಲ. ಸದರಿ ಪಂಚನಾಮೆಯನ್ನು ಎಷ್ಟು ವರ್ಷಗಳ ಹಿಂದೆ ಅಬಕಾರಿ ಪೋಲೀಸರು ಮಾಡಿರುತ್ತಾರೆ ಎಂದು ನನಗೆ ಹೇಳಲು ಬರುವುದಿಲ್ಲ. ನನ್ನ ಸಮಕ್ಷಮದಲ್ಲಿ ನಿ.ಪಿ.1 ರಂತೆ ಪಂಚನಾಮೆ ಜರುಗಿಸಿರುವುದಿಲ್ಲ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**ಪಾಟೀ ಸವಾಲು : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ದಿ: 23/08/2023 ರಂದು ಸಂಜೆ 7 ರಿಂದ 8 ಗಂಟೆವರೆಗೆ ದೇವನತೆಗನೂರು ಗ್ರಾಮದ ಜಮೀಬಾಯಿ ಇವರಿಗೆ ಸೇರಿದ ಕಿರಾಣಿ ಅಂಗಡಿಯ ಮೇಲೆ ದಾಳಿ ಮಾಡಿ ನನ್ನ ಹಾಗೂ ಚಾಸಾ-2 ಇವರ ಸಮಕ್ಷಮದಲ್ಲಿ ಚಾಸಾ-1 ರವರು ಆರೋಪಿತಳ ಅಂಗಡಿಯಿಂದ ನಿ.ಪಿ.1 ರಂತೆ ಪಂಚನಾಮೆಯನ್ನು ಮಾಡಿ 1) 90 ಎಮ್.ಎಲ್.ನ ಒರಿಜಿನಲ್ ಚಾಯ್ಸ 96 ಟೆಟ್ರಾ ಪ್ಯಾಕಗಳು ಮಾರಾಟಕ್ಕಾಗಿ ಸಂಗ್ರಹಿಸಿಟ್ಟಿದ್ದು, ಅವುಗಳನ್ನು ಜಪ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ.1 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಸಂಗ್ರಹಿಸಿಟ್ಟಿರುವ ಮದ್ಯದಿಂದ

ರಾಸಾಯನಿಕ ಪರೀಕ್ಷೆಗಾಗಿ 30 ಟೆಟ್ರಾ ಪ್ಯಾಕಗಳನ್ನು ನನ್ನ ಹಾಗೂ ಚಾಸಾ-2 ಇವರ ಸಮಕ್ಷಮದಲ್ಲಿ ಸ್ಯಾಂಪಲನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ**

ಈ ಹಂತದಲ್ಲಿ ಆರೋಪಿ ಪರ ವಕೀಲರು ಪಾಟೀ ಸವಾಲು ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ : **ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ ಇದೆ.**

**Sd/-**

**ಪ್ರ.ದ.ನ್ಯಾ.ದಂ.ಗಳು, ಶಹಾಬಾದ**